**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಾರ್ಕಳ.**

ದಿನಾಂಕ 5 ನೇ ಮಾರ್ಚ್ ಮಾಹೆ 2020 ನೇ ಇಸವಿ.

ಸಿ.ಸಿ. ನಂಃ 1466/2019

ಸುಧಾಕರ ಶೆಟ್ಟಿ,
ಪ್ರಾಯ 50 ವರ್ಷಗಳು,
ತಂದೆಃ ಕೊರಗ ಶೆಟ್ಟಿ,
ವಾಸಃ ದುರ್ಗಾದಯಾ, ಜೋಡುರಸ್ತೆ,
ಕುಕ್ಕುಂದೂರು ಗ್ರಾಮ,
ಕಾರ್ಕಳ ತಾಲೂಕು, ಉಡುಪಿ ಜಿಲ್ಲೆ. ... ಪಿರ್ಯಾದುದಾರರು

- ವಿರುದ್ಧ -

ಕಾಳಿಯಪ್ಪ, ಪ್ರಾಯ 45 ವರ್ಷಗಳು,
ತಂದೆಃ ದಿ. ಮೂರ್ತಿ,
ವಾಸಃ ಪೊಸನೊಟ್ಟು ಹೌಸ್,
ನಕ್ರೆ ಅಂಚೆ,
ಕಾರ್ಕಳ ತಾಲೂಕು, ಉಡುಪಿ ಜಿಲ್ಲೆ. ... ಆರೋಪಿ

## ಆಪಾದನೆ

ಆರೋಪಿಯಾದ ನೀವು ಪಿರ್ಯಾದಿದಾರರಿಂದ ಪಡೆದ ಸಾಲದ ಹಣದ ಮರುಪಾವತಿಯ ಸಲುವಾಗಿ ದಿಃ 13-08-2019 ರಂದು ರೂ. 1,50,000/- ಗಳಿಗೆ ವಿಜಯಾ ಬ್ಯಾಂಕ್, ಕುಕ್ಕುಂದೂರು ಶಾಖೆ, ಚೆಕ್ ಸಂಃ 877931 ನ್ನು ನೀಡಿದ್ದು, ಪಿರ್ಯಾದಿದಾರರು ಅದನ್ನು ನಗದೀಕರಿಸಲು ಸಿಂಡಿಕೇಟ್ ಬ್ಯಾಂಕ್, ನಕ್ರೆ ಶಾಖೆಗೆ ಹಾಜರುಪಡಿಸಿದ್ದು, ಆದರೆ 'Funds Insufficient' ಎಂಬ ವಿಷಯವನ್ನು ಸದರಿ ಬ್ಯಾಂಕಿನವರು ದಿಃ 17-08-2019 ರ ಹಿಂಬರಹದ ಮೂಲಕ ತಿಳಿಯಪಡಿಸಿದ್ದು, ಅದರಂತೆ ಪಿರ್ಯಾದಿದಾರರು ದಿಃ 04-09-2019 ರಂದು ವಕೀಲರ ಮೂಲಕ ನೋಟಿಸು ಜಾರಿ ಮಾಡಿ ಸದರಿ ಚೆಕ್ಕಿನ ಹಣವನ್ನು 15 ದಿನಗಳ ಒಳಗೆ

ಮರುಪಾವತಿ ಮಾಡುವಂತೆ ಕೇಳಿಕೊಂಡಿದ್ದು, ಸದರಿ ನೋಟಿಸನ್ನು ನೀವು ದಿಃ **05-09-2019** ರಂದು ಸ್ವೀಕರಿಸಿ ಸುಳ್ಳು ಪ್ರತ್ಯುತ್ತರವನ್ನು ನೀಡಿದ್ದು, ಇದುವರೆಗೆ ಚೆಕ್ಕಿನ ಬಾಬ್ತು ಹಣವನ್ನು ಪಿರ್ಯಾದಿದಾರರಿಗೆ ನೀಡಿರುವುದಿಲ್ಲ. ಆ ಮೂಲಕ ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಲಂ **138** ಕೆಳಗೆ ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುವಂತೆ ಅಪರಾಧ ಮಾಡಿರುತ್ತೀರಿ ಎಂದು ನಿಮ್ಮ ಮೇಲೆ ಆರೋಪ ಇದೆ.

ಪ್ರಶ್ನೆ **1**ಃ ಮೇಲೆ ಹೇಳಿದ ಆರೋಪವನ್ನು ಕೇಳಿರುವಿರಾ?
ಉತ್ತರಃ

ಪ್ರಶ್ನೆ **2**ಃ ತಪ್ಪು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆ ಬಯಸುತ್ತೀರೋ?
ಉತ್ತರಃ

(ಆರೋಪಿಗೆ ಮೇಲಿನ ಆಪಾದನೆಯನ್ನು ಓದಿ ಹೇಳಿ ವಿವರಿಸಿದ್ದು, ಅವರು ಅದನ್ನು ಸರಿಯಾಗಿ ತಿಳಿದುಕೊಂಡು ಉತ್ತರಿಸಿದ್ದಾರೆ ಎಂಬುದಾಗಿ ಈ ಮೂಲಕ ದೃಢೀಕರಿಸುತ್ತೇನೆ.)

ಪ್ರ.ಸಿ.ನ್ಯಾ. ಮತ್ತು ಪ್ರ.ದ.ನ್ಯಾ.ದಂ.,
ಕಾರ್ಕಳ.

'Unclaimed'